For more job news visit : www.kpscvaani.com

ಕರ್ನಾಟಕ ಪರೀಕ್ಷಾ ಪ್ರಾಧಿಕಾರ
Karnataka Examinations Authority

ಸಂಖ್ಯೆ: ಇಡಿ/ಕೆಇಎ/02/ನೇ.ವಿ/2026 ದಿನಾಂಕ: 11.08.2026

ಪ್ರಕಟಣೆ

ಸರ್ಕಾರದ ಅಧಿಸೂಚನೆ ಸಂಖ್ಯೆ: ಸಿಆಸುಇ 102 ಸೇವನೆ 2022 ದಿನಾಂಕ 18.03.2025 ರಂತೆ, ಅಭ್ಯರ್ಥಿಯು ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿಯು ನಡೆಸುವ ಎಸ್.ಎಸ್.ಎಲ್.ಸಿ. ಪರೀಕ್ಷೆಯಲ್ಲಿ ಅಥವಾ; ರಾಜ್ಯ ಸರ್ಕಾರವು ಅದಕ್ಕೆ ತತ್ಸಮಾನವೆಂದು ಘೋಷಿಸಿದ ಯಾವುದೇ ಪರೀಕ್ಷೆಯಲ್ಲಿ ಅಥವಾ; ಎಸ್.ಎಸ್.ಎಲ್.ಸಿ.ಗಿಂತ ಉನ್ನತ ಮಟ್ಟದ ಪರೀಕ್ಷೆಗಳಲ್ಲಿ ಕನ್ನಡ ವಿಷಯವನ್ನು ಪ್ರಥಮ ಅಥವಾ ದ್ವಿತೀಯ ಭಾಷೆಯಾಗಿ ಅಭ್ಯಸಿಸಿದ್ದರೆ, ಅಥವಾ; ಕನ್ನಡ ಮಾಧ್ಯಮದಲ್ಲಿ ಅಧ್ಯಯನ ಮಾಡಿ ಇಂತಹ ಪರೀಕ್ಷೆಗಳನ್ನು ಪಾಸು ಮಾಡಿದ್ದರೆ, ಅಥವಾ; ಆಯೋಗ ಅಥವಾ ಇನ್ನಿತರ ಯಾವುದೇ ಆಯ್ಕೆ ಪ್ರಾಧಿಕಾರವು ಈ ಹಿಂದೆ ನಡೆಸಿದ ಕನ್ನಡ ಭಾಷೆಯ ಪರೀಕ್ಷೆಯಲ್ಲಿ (ಕಡ್ಡಾಯ ಕನ್ನಡ ಪರೀಕ್ಷೆ) ಉತ್ತೀರ್ಣರಾಗಿದ್ದರೆ, ಅಂತಹ ಅಭ್ಯರ್ಥಿಗಳಿಗೆ ಕನ್ನಡ ಭಾಷಾ ಪರೀಕ್ಷೆಯಿಂದ ವಿನಾಯಿತಿ ನೀಡಿ ಸದರಿ ಅಭ್ಯರ್ಥಿಗಳನ್ನು ಹೊರತು ಪಡಿಸಿ ಉಳಿದ ಅನ್ವಯವಾಗುವ ಅಭ್ಯರ್ಥಿಗಳಿಗೆ ಕನ್ನಡ ಭಾಷಾ ಪರೀಕ್ಷೆಯನ್ನು ನಡೆಸಬೇಕಾಗಿರುತ್ತದೆ.

ಕರ್ನಾಟಕ ಪರೀಕ್ಷಾ ಪ್ರಾಧಿಕಾರವು ಅಧಿಸೂಚಿಸಿರುವ ಉಳಿಕೆ ಮೂಲ ವೃಂದ ಹಾಗೂ ಕಲ್ಯಾಣ ಕರ್ನಾಟಕ ವೃಂದದ ಈ ಕೆಳಕಂಡ ಹುದ್ದೆಗಳ ಅಭ್ಯರ್ಥಿಗಳಿಗೆ (ಅನ್ವಯವಾಗುವ ಅಭ್ಯರ್ಥಿಗಳಿಗೆ) ಕನ್ನಡ ಭಾಷಾ ಪರೀಕ್ಷೆಯನ್ನು ಕೆಳಗಿನ ವೇಳಾಪಟ್ಟಿಯಂತೆ ನಿಗದಿಪಡಿಸಲಾಗಿದೆ.

1. **ಪೊಲೀಸ್ ಇಲಾಖೆಯಲ್ಲಿನ CAR/DAR/KSRP/IRB/KSISF ಕಾನ್ಸ್‌ಟೇಬಲ್ ಹುದ್ದೆಗಳು.**
2. **ಕಂದಾಯ ಇಲಾಖೆಯ ಗ್ರಾಮ ಆಡಳಿತಾಧಿಕಾರಿ ಹುದ್ದೆಗಳು.**
3. **ಭೂಮಾಪಕರು ಹುದ್ದೆಗಳು.**
4. **ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳಲ್ಲಿನ ಶಿಕ್ಷಕರ ಹುದ್ದೆಗಳು.**
5. **ಕರ್ನಾಟಕ ರಾಜ್ಯ ಕನೂನು ಸೇವೆಗಳ ಪ್ರಾಧಿಕಾರದಲ್ಲಿನ ಸೆಕ್ಷನ್ ಆಫೀಸರ್ ಹುದ್ದೆಗಳು.**

ಕನ್ನಡ ಭಾಷಾ ಪರೀಕ್ಷೆಯ ವೇಳಾಪಟ್ಟಿಯು ಈ ಕೆಳಗಿನಂತಿದೆ.

ದಿನಾಂಕ	ವಿಷಯ	ಸಮಯ	ಗರಿಷ್ಠ ಅಂಕಗಳು	ಒಟ್ಟು ಪ್ರಶ್ನೆಗಳು
22.08.2026 (ಶನಿವಾರ)	ಕನ್ನಡ ಭಾಷಾ ಪರೀಕ್ಷೆ	ಮಧ್ಯಾಹ್ನ 03.00 ರಿಂದ ಸಂಜೆ 05.00 ವರೆಗೆ	150	100

ಕಾರ್ಯನಿರ್ವಾಹಕ ನಿರ್ದೇಶಕರು

ಸೂಚನೆ:

1. ಪ್ರತಿ ಪ್ರಶ್ನೆಗೆ 1.5 ಅಂಕಗಳಿದ್ದು, ಎಲ್ಲಾ ಪ್ರಶ್ನೆಗಳಿಗೆ ಸಮಾನ ಅಂಕಗಳಿರುತ್ತದೆ.
2. ಕನ್ನಡ ಭಾಷಾ ಪರೀಕ್ಷೆಯು ಬಹು ಆಯ್ಕೆ ಮಾದರಿಯದ್ದಾಗಿರುತ್ತದೆ.
3. ಕನ್ನಡ ಭಾಷಾ ಪರೀಕ್ಷೆಯಲ್ಲಿ ಅರ್ಹತೆ ಹೊಂದಲು ಅನ್ವಯಿಸುವ **ಅಭ್ಯರ್ಥಿಗಳಿಗೆ ಕನಿಷ್ಠ 50 ಅಂಕಗಳನ್ನು ಗಳಿಸುವುದು ಕಡ್ಡಾಯವಾಗಿರುತ್ತದೆ.**
4. **ಅಭ್ಯರ್ಥಿಯು ಕನ್ನಡ ಭಾಷಾ ಪರೀಕ್ಷೆಯು ಕೇವಲ ಅರ್ಹತಾ ಪರೀಕ್ಷೆಯಾಗಿದ್ದು, ಅರ್ಹತೆ ಹೊಂದದ ಹೊರತು ಹುದ್ದೆಯ ಆಯ್ಕೆಗೆ ಅರ್ಹರಾಗುವುದಿಲ್ಲ.**
5. ಕನ್ನಡ ಭಾಷಾ ಪರೀಕ್ಷೆಯಲ್ಲಿ ಅರ್ಹತೆ ಹೊಂದಿದ ಅಂಕಗಳನ್ನು ಆಯ್ಕೆಗೆ ಪರಿಗಣಿಸಲಾಗುವುದಿಲ್ಲ.
6. **ಋಣಾತ್ಮಕ ಮೌಲ್ಯಮಾಪನವಿರುವುದಿಲ್ಲ.**

18ನೇ ಅಡ್ಡ ರಸ್ತೆ, ಸಂಪಿಗೆ ರಸ್ತೆ, ಮಲ್ಲೇಶ್ವರಂ, ಬೆಂಗಳೂರು – 560 012
18th Cross, Sampige Road, Malleshwaram, Bengaluru - 560 012.
Phone: 080 - 23 564 583 Helpline : 080 - 23 460 460.
e-mail : keauthority-ka@nic.in Website : http://kea.kar.nic.in